# ಇ–ಸ್ವತ್ತು ಸುಧಾರಣಾ ಸಲಹಾ ಸಮಿತಿ
## ಬೆಂಗಳೂರು ನಗರ ಜಿಲ್ಲಾ ಪಂಚಾಯಿತಿ
2ನೇ ಮಹಡಿ, ಎಸ್. ಕರಿಯಪ್ಪ ರಸ್ತೆ, ಬನಶಂಕರಿ, ಬೆಂಗಳೂರು – 70

ದಿನಾಂಕ : 16.06.2017

ಸಂಖ್ಯೆ : ಇ–ಸ್ವತ್ತು/ಸುಸಸ/1/2017–18

ಇವರಿಗೆ,

1) ರಾಜ್ಯದ ಎಲ್ಲಾ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್,
2) ರಾಜ್ಯದ ಎಲ್ಲಾ ಕಾರ್ಯನಿರ್ವಾಹಕ ಅಧಿಕಾರಿಗಳು, ತಾಲ್ಲೂಕು ಪಂಚಾಯತ್,
3) ರಾಜ್ಯದ ಎಲ್ಲಾ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳು, ಗ್ರಾಮ ಪಂಚಾಯತ್,

ಮಾನ್ಯರೆ,

ವಿಷಯ :ಬೆಂಗಳೂರು ಸುತ್ತಮುತ್ತಲಿನ ಪ್ರದೇಶಗಳಲ್ಲಿ ಗ್ರಾಮ ಪಂಚಾಯಿತಿಗಳ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು ಸರ್ಕಾರದ ನಿಯಮಗಳನ್ನು ಪಾಲಿಸದೆ ಸ್ವತ್ತುಗಳಿಗೆ ನಮೂನೆ–9 ಮತ್ತು ನಮೂನೆ–11ಬಿ ವಿತರಿಸಿರುವ ಬಗ್ಗೆ – ಸಮಿತಿ ರಚನೆ ಬಗ್ಗೆ.

ಉಲ್ಲೇಖ :ಸರ್ಕಾರಿ ಆದೇಶ ಸಂಖ್ಯೆ : ಗ್ರಾಅಪ 690 ಗ್ರಾಪಂಅ 2015 ಬೆಂಗಳೂರು, ದಿನಾಂಕ : 05–04–2017.

ಮೇಲ್ಕಾಣಿಸಿದ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖದಲ್ಲಿ ನಮೂದಿಸಲಾದ ಸರ್ಕಾರಿ ಆದೇಶದ ಪ್ರಕಾರ ರಚನೆ ಗೊಂಡಿರುವ ಇ–ಸ್ವತ್ತು ಸುಧಾರಣಾ ಸಲಹಾ ಸಮಿತಿಯು ಬೆಂಗಳೂರು ನಗರ ಜಿಲ್ಲಾ ಪಂಚಾಯತ್ ಕಾರ್ಯಾಲಯ, ಬನಶಂಕರಿ ಇಲ್ಲಿ 2ನೇ ಮಹಡಿಯಲ್ಲಿ ತನ್ನ ಕಾರ್ಯನಿರ್ವಹಣೆಯನ್ನು ದಿನಾಂಕ 09.06.2017 ರಿಂದ ಆರಂಭಿಸಿರುತ್ತದೆ.

ಸಮಿತಿಯು ಪರಿಶೀಲಿಸಬೇಕಾದ ಅಂಶಗಳು ಈ ಕೆಳಗಿನಂತಿವೆ.

**ಸಮಿತಿಯು ಪರಿಶೀಲಿಸಬೇಕಾದ ಅಂಶಗಳು ಹಾಗೂ ಷರತ್ತು ಮತ್ತು ನಿಬಂಧನೆಗಳು :**

1. ನಿವೃತ್ತ ಐ.ಎ.ಎಸ್. ಅಧಿಕಾರಿಯಾದ ಶ್ರೀ ಆರ್.ಬಿ. ಅಗವಾನೆ ರವರ ನೇತೃತ್ವದ ಸಮಿತಿ ವರದಿಯ ಮೇರೆಗೆ ಬೆಂಗಳೂರು ನಗರ ಜಿಲ್ಲೆ, ಬೆಂಗಳೂರು ಉತ್ತರ ತಾಲ್ಲೂಕಿನ 5 ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಕಾನೂನುಬಾಹಿರವಾಗಿ ನಮೂನೆ–11ಬಿ ವಿತರಿಸಿರುವುದಾಗಿ ವರದಿ ಮಾಡಿದ ಹಿನ್ನೆಲೆಯಲ್ಲಿ ಅವುಗಳನ್ನೆಲ್ಲಾ ರದ್ದುಪಡಿಸಿ ಆದೇಶಿಸಲಾಗಿದ್ದು, ಈ ಆದೇಶದಿಂದ ಬಾಧಿತರಾದವರಿಗೆ ನ್ಯಾಯ ದೊರಕಿಸಲು ಇರುವ ಮಾರ್ಗೋಪಾಯಗಳನ್ನು ಸೂಚಿಸುವುದು.
2. ಇ–ಸ್ವತ್ತು ಅನುಷ್ಠಾನಕ್ಕೆ ಹೊರಡಿಸಲಾಗಿರುವ ಮಾರ್ಗಸೂಚಿ ಕ್ಷೇತ್ರದ ಮಟ್ಟದಲ್ಲಿ ಅನುಷ್ಠಾನಗೊಳ್ಳುವ ಹಂತದಲ್ಲಿ ಎದುರಾಗುವ ವಾಸ್ತವಿಕ ಸಮಸ್ಯೆಗಳನ್ನು ಅಧ್ಯಯನ ಮಾಡಿ ಅವಶ್ಯವಿರುವ ಮಾರ್ಪಾಟುಗಳಿಗೆ ಸಲಹೆ ನೀಡುವುದು.
3. ಇದಕ್ಕೆ ಪೂರಕವಾಗಿ ಆಯ್ದ ಜಿಲ್ಲೆಗಳಲ್ಲಿ ಪ್ರವಾಸ ಮಾಡಿ ಕ್ಷೇತ್ರ ಮಟ್ಟದ ಸಮಸ್ಯೆಗಳನ್ನು ಅಧ್ಯಯನ ಮಾಡುವುದು.
4. ಇ–ಸ್ವತ್ತು ಅನುಷ್ಠಾನದಲ್ಲಿ ಮಾರ್ಗಸೂಚಿ ಉಲ್ಲಂಘನೆ ಮಾಡಿ ಅಕ್ರಮವೆಸಗುವ ಪ್ರಕರಣಗಳು ಬೆಂಗಳೂರು ನಗರ, ಬೆಂಗಳೂರು ಗ್ರಾಮಾಂತರ, ರಾಮನಗರ ಹಾಗೂ ಮೈಸೂರು ಜಿಲ್ಲೆಗಳಲ್ಲಿ ಹೆಚ್ಚಾಗಿ ನಡೆದಿವೆ ಹಾಗೂ ರಾಜ್ಯದ ಎಲ್ಲಾ ಜಿಲ್ಲೆಗಳ ಆಯ್ದ ಗ್ರಾಮ ಪಂಚಾಯಿತಿಗಳಿಗೆ ಭೇಟಿ ನೀಡಿ ಪರಿಶೀಲಿಸಿ ವರದಿ ನೀಡುವುದು.

ಸಮಿತಿಯು ಕಾರ್ಯಾರಂಭ ಮಾಡಿದ ದಿನಾಂಕದಿಂದ ಮೂರು ತಿಂಗಳೊಳಗಾಗಿ ವರದಿಯನ್ನು ನೀಡಲು ಉದ್ದೇಶಿಸಿರುತ್ತದೆ. ಸಮಿತಿಯು ಪರಿಶೀಲಿಸಬೇಕಾದ ಅಂಶಗಳಿಗೆ ಸಂಬಂಧಿಸಿದಂತೆ ಬೆಂಗಳೂರು ನಗರ ಜಿಲ್ಲೆಯ 05

ಗ್ರಾಮಪಂಚಾಯಿತಿಗಳು ಹಾಗೂ ಕ್ಷೇತ್ರ ಮಟ್ಟದ ಸಮಸ್ಯೆಗಳನ್ನು ಅಭ್ಯಸಿಸಲು ಅವಶ್ಯ ಕಂಡ ಪಂಚಾಯತ್ ರಾಜ್ ಸಂಸ್ಥೆಗಳಿಗೆ ಭೇಟಿ ನೀಡಲು ಉದ್ದೇಶಿಸಲಾಗಿದೆ.

ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ನಡೆಯವ ಅನಧಿಕೃತ ಆಸ್ತಿಗಳ ನೋಂದಣಿ, ಮಾರಾಟ ಮುಂತಾದ ವಹಿವಾಟುಗಳನ್ನು ತಡೆಗಟ್ಟುವ ಸಲುವಾಗಿ ಮಾನ್ಯ ಕರ್ನಾಟಕ ಉಚ್ಚ ನ್ಯಾಯಾಲಯದ ಆದೇಶದಂತೆ ಎನ್ಐಸಿ ರೂಪಿಸಿ ದಿನಾಂಕ 15.06.2013 ರಿಂದ ಜಾರಿಗೊಳಿಸಲಾಗಿರುವ ಇ-ಸ್ವತ್ತು ತಂತ್ರಾಂಶದ ಅನುಷ್ಠಾನದಲ್ಲಿ ತಮಗೆ ಕಂಡುಬಂದಿರುವ ಸಮಸ್ಯೆಗಳು, ಅವುಗಳ ಪರಿಹಾರಗಳು ಹಾಗೂ ಪಂಚಾಯತ್ ಮಟ್ಟದಲ್ಲಿ ತಂತ್ರಾಂಶದ ಪರಿಣಾಮಕಾರಿ ಅನುಷ್ಠಾನದ ಕುರಿತು ತಮ್ಮಿಂದ ಅಮೂಲ್ಯ ಸಲಹೆಗಳನ್ನು ಆಹ್ವಾನಿಸಲಾಗಿದೆ.

ಈ ಕುರಿತು ತಮ್ಮ ಸಲಹೆ-ಸೂಚನೆಗಳನ್ನು ಜುಲೈ 31, 2017 ರೊಳಗಾಗಿ ಲಿಖಿತವಾಗಿ ಸಮಿತಿಯ ಕಾರ್ಯಾಲಯಕ್ಕೆ ಕಳುಹಿಸಿಕೊಡಬಹುದಾಗಿರುತ್ತದೆ. ಯಾವುದೇ ಸಲಹೆ-ಸೂಚನೆಗಳನ್ನು ಮುದ್ದಾಂ ನೀಡಲು ಬಯಸಿದಲ್ಲಿ ಕಛೇರಿ ವೇಳೆಯಲ್ಲಿ ಹಾಜರಾಗಿ ನೀಡಬಹುದಾಗಿರುತ್ತದೆ.

ಸಮಿತಿಯ ಸದಸ್ಯರು ಕ್ಷೇತ್ರ ಮಟ್ಟದ ಸಮಸ್ಯೆಗಳನ್ನು ಅಭ್ಯಸಿಸಲು ತಮ್ಮಲ್ಲಿಗೆ ಭೇಟಿ ನೀಡಿದಾಗ ಎಲ್ಲಾ ಪೂರಕ ದಾಖಲಾತಿ ಹಾಗೂ ಮಾಹಿತಿಯನ್ನು ಒದಗಿಸಿ ಸಹಕರಿಸುವಂತೆ ಕೋರಿದೆ.

ತಮ್ಮ ವಿಶ್ವಾಸಿ,

(ಕೆ.ಎಚ್. ಗೋಪಾಲಕೃಷ್ಣೇಗೌಡ)
ಅಧ್ಯಕ್ಷರು,
ಇ-ಸ್ವತ್ತು ಸುಧಾರಣಾ ಸಲಹಾ ಸಮಿತಿ